**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಎಂ.ಗೌಡ ಇವರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕಲ್ಯಾಣ ಕರ್ನಾಟಕ ವೃಂದದ ನೇಮಕಾತಿ ಪ್ರಕ್ರಿಯೆಯಲ್ಲಿ ಹಲವಾರು ಅಕ್ರಮ ನಡೆದಿರುತ್ತದೆ. ಸದರಿ ಅಕ್ರಮದಲ್ಲಿ ಉಚ್ಚನ್ಯಾಯಾಲಯದ ಆದೇಶ ಮತ್ತು ಸರ್ಕಾರದ ಆದೇಶದಡಿಯಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು ರವರು ರದ್ದು ಪಡಿಸಿರುವ ಮೂಲ ಪದವಿ ಅಂಕಪಟ್ಟಿಯನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕಲ್ಯಾಣ ಕರ್ನಾಟಕ ವೃಂದದ ನೇಮಕಾತಿ ಪ್ರಕ್ರಿಯೆಯಲ್ಲಿ ಪರಿಗಣಿಸಿ, ಅವರಿಗೆ ಲಿಖಿತ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಿರುತ್ತಾರೆ ಮತ್ತು ಇವರನ್ನು ಆಯ್ಕೆ ಮಾಡುವ ಸಲುವಾಗಿ ಎಲ್ಲಾ ಅಭ್ಯರ್ಥಿಗಳಿಗಿಂತ ಹೆಚ್ಚು ಅಂಕ ಬರುವಂತೆ ಮಾಡಿ ಅಕ್ರಮವೆಸಗಿರುತ್ತಾರೆ. ಈ ರೀತಿ ಅಕ್ರಮ ನೇಮಕಾತಿಯನ್ನು ತಡೆಗಟ್ಟಲು ಸರ್ಕಾರವು ವಿಶೇಷ ತನಿಖಾ ತಂಡದಿಂದ ತನಿಖೆ ಮಾಡಿಸಿ ಅರ್ಹ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂಬ ಗಂಬೀರ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

*****

**ಉತ್ತರ:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಲ್ಲಿ ಅನುಚ್ಛೇದ 371 ಜೆ ರನ್ವಯ ಸ್ಥಳೀಯ ವೃಂದದಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ ಸಹಾಯಕ ಪ್ರಾಧ್ಯಪಕ ವೃಂದದ ಗ್ರೂಪ್ ಎ-15 ಹುದ್ದೆಗಳನ್ನು ಮಾನ್ಯ ಕರ್ನಾಟಕ ರಾಜ್ಯಪಾಲರ ಅನುಮೋದನೆ ಹಾಗೂ ಸರ್ಕಾರದ ಅನುಮತಿಯ ನಂತರ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ದಿನಾಂಕ:24.03.2023ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಪತ್ರದಲ್ಲಿ ಹೊರಡಿಸಿರುವ ನಿಯಮ ಹಾಗೂ ಸ್ಕೋರ್ ಕಾರ್ಡ್ (Score Card) ರನ್ವಯ ದಿನಾಂಕ:24.03.2023ರ ಅಧಿಸೂಚನೆಯಲ್ಲಿ ಪ್ರಕಟಿಸಿರುವ ವಿವಿಧ ಹುದ್ದೆಗಳಿಗೆ ಸ್ವೀಕೃತವಾದ ಅರ್ಜಿಗಳನ್ನು ಪರಾಮರ್ಶಿಸಿ ಅರ್ಹ ಅಭ್ಯರ್ಥಿಗಳನ್ನು ಗುರುತಿಸುವ ಸಲುವಾಗಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಅಭ್ಯರ್ಥಿಗಳು ಸಲ್ಲಿಸಿರುವ ಅರ್ಜಿಗಳಿಗೆ ಸಂಬಂಧಿಸಿದಂತೆ ನಿಗಧಿತ ಅವಧಿಯೊಳಗೆ ಸ್ವೀಕೃತಿಯಾದಂತಹ ಅರ್ಜಿಗಳಲ್ಲಿ ಮೂಲ ವಿದ್ಯಾರ್ಹತೆ, ಅನುಭವ, ಇತ್ಯಾದಿಯನ್ನು ಪರಾಮರ್ಶಿಸಿ ಅರ್ಹ ಅಭ್ಯರ್ಥಿಗಳನ್ನು ಸಮಿತಿಯಿಂದ ಗುರುತಿಸಬೇಕಾಗಿದ್ದು, ಅಭ್ಯರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು ಪರಾಮರ್ಶಿಸುವ ಸಂದರ್ಭದಲ್ಲಿ ಅಭ್ಯರ್ಥಿಗಳ ಅಂಕಪಟ್ಟಿಯಲ್ಲಿ ಹಾಗೂ ಇತರೆ ದಾಖಲಾತಿಗಳಲ್ಲಿ

ಸರ್ಕಾರದ ಆದೇಶದಡಿಯಲ್ಲಿ ಕೃಷಿ ವಿಶ್ವವಿದ್ಯಾಲಯ ರಾಯಚೂರು ರವರು ರದ್ದುಪಡಿಸಿರುವ ಮೂಲ ಪದವಿ ಅಂಕಪಟ್ಟಿಯ ಕುರಿತು ಮಾಹಿತಿಯು ಕಂಡುಬಂದಿರುವುದಿಲ್ಲವಾದ್ದರಿಂದ, ನಿಯಮಾನುಸಾರ ಸಮಿತಿಯು ಅರ್ಹ ಅಭ್ಯರ್ಥಿಗಳನ್ನು ಗುರುತಿಸಿರುತ್ತಾರೆ.

ಸದರಿ ಸಮಿತಿಯ ಶಿಫಾರಸ್ಸಿನಂತೆ ಅರ್ಹ ಅಭ್ಯರ್ಥಿಗಳ ವಿವರವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅಂತರ್ಜಾಲದಲ್ಲಿ (web site) ಪ್ರಕಟಿಸಲಾಗಿರುತ್ತದೆ ಹಾಗೂ ಅರ್ಹ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳು ಗಳಿಸಿರುವ ಅಂಕಗಳನ್ನು ಕೃಷಿ ವಿಶ್ವವಿದ್ಯಾನಿಯಲದ ಅಂತರ್ಜಾಲದಲ್ಲಿ (web site) ಪ್ರಕಟಿಸಲಾಗಿರುತ್ತದೆ. ಮುಂದುವರೆದು, ಕರ್ನಾಟಕ ರಾಜ್ಯ ಪತ್ರದಲ್ಲಿ ಹೊರಡಿಸಿರುವ ನಿಯಮ ಹಾಗೂ ಸ್ಕೋರ್ ಕಾರ್ಡ್(Score Card)ರನ್ವಯ, ಅಭ್ಯರ್ಥಿಗಳು ಗಳಿಸಿದ ಅಂಕ ಹಾಗೂ ಪ್ರಕಟಿಸಿರುವ ಹುದ್ದೆಗಳ ಮೀಸಲಾತಿಯನ್ವಯ 1:5 ಅನುಪಾತದಂತೆ ಅಭ್ಯರ್ಥಿಗಳಿಗೆ ಸಂದರ್ಶನವನ್ನು ಆಯ್ಕೆ ಸಮಿತಿಯು ನಡೆಸಲಾಗಿರುತ್ತದೆ. ಅದರಂತೆ, ಇನ್ನು ಆಯ್ಕೆ ಪ್ರಕ್ರಿಯೆಯನ್ನು ವ್ಯವಸ್ಥಾಪನ ಮಂಡಳಿಯ ಮುಂದೆ ಮಂಡಿಸಿ ಅಪರ ಅನುಮೋದನೆಯನ್ನು ಪಡೆದ ನಂತರವೇ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ.

ಈ ಹಿನ್ನೆಲೆಯಲ್ಲಿ, ಕೃಷಿ ವಿಶ್ವವಿದ್ಯಾನಿಲಯವು ಕರ್ನಾಟಕ ರಾಜ್ಯ ಪತ್ರದಲ್ಲಿ ಹೊರಡಿಸಿರುವ ನಿಯಮ ಹಾಗೂ ಸ್ಕೋರ್ ಕಾರ್ಡ್(Score Card) ಅನ್ವಯ ಮೆರಿಟ್ ಆಧಾರದ ಮೇಲೆ ನೇರ ನೇಮಕಾತಿಯನ್ನು ಕೈಗೊಂಡಿರುವುದರಿಂದ ಸದರಿ ನೇಮಕಾತಿಯಲ್ಲಿ ಯಾವುದೇ ಪ್ರತಿಭಾನ್ವಿತ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದಿಲ್ಲ ಹಾಗಾಗಿ ಸದರಿ ನೇಮಕಾತಿಯಲ್ಲಿ ಯಾವುದೇ ಅಕ್ರಮಗಳು ನಡೆದಿರುವುದಿಲ್ಲ.

ಸಂಖ್ಯೆ: AGRI/47/AUB/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು